ದಿನಾಂಕ 23.08.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ- ಶ್ರೀಮತಿ ಎಸ್.ಎನ್.ಎಸ್. ವಕೀಲರಿಂದಃ-**

ನಾನು ದಾವಾ ಸ್ವತ್ತುಗಳಿಗೆ ಸಂಬಂಧಿಸಿದಂತೆ ಪೊನ್ನಂಪೇಟೆಯ ಕಿರಿಯ ಶ್ರೇಣಿ ನ್ಯಾಯಾಲಯದಲ್ಲಿ ಅಸಲು ದಾವಾ ಸಂಖ್ಯೆ 91/2010 ನ್ನು ದಾಖಲಿಸಿರುತ್ತೇನೆ ಎಂದರೆ ಸರಿ. ಸದರಿ ದಾವೆ 2017 ರಲ್ಲಿ ವಜಾ ಆಗಿರುತ್ತದೆ ಎಂದರೆ ಸರಿ. ಸದರಿ ವಜಾ ಆದೇಶವನ್ನು ಪ್ರಶ್ನಿಸಿ ನಾನು ಇದೇ ನ್ಯಾಯಾಲಯದಲ್ಲಿ ಆರ್.ಎ.ಸಂಖ್ಯೆ 11/2017 ನ್ನು ದಾಖಲಿಸಿರುತ್ತೇನೆ ಎಂದರೆ ಸರಿ. ಸದರಿ ಮೇಲ್ಮನವಿ ವಜಾ ಆಗಿರುತ್ತದೆ ಎಂದರೆ ಸರಿ. ಅಸಲು ದಾವಾ ಸಂಖ್ಯೆ 91/2010 ರ ತೀರ್ಪು ಮತ್ತು ಡಿಕ್ರಿ ಹಾಗೂ ಆರ್.ಎ. ಸಂಖ್ಯೆ 11/2017 ರ ತೀರ್ಪು ಮತ್ತು ಡಿಕ್ರಿಯ ದೃಢೀಕೃತ ಪ್ರತಿಗಳನ್ನು ಸಾಕ್ಷಿಗೆ ತೋರಿಸಿದ್ದು, ಸಾಕ್ಷಿಯು ಸದರಿ ದಾಖಲೆಗಳನ್ನು ನೋಡಿ ಗುರುತಿಸಿದ್ದರಿಂದ, ಅವುಗಳನ್ನು ನಿಶಾನೆ ಡಿ. 1 ರಿಂದ 4 ಎಂದು ಗುರುತಿಸಲಾಯಿತು. ದಾವಾ ಸ್ವತ್ತುಗಳಿಗೆ ಸಂಬಂಧಿಸಿದಂತೆ ಈಗಾಗಲೇ ನಿಶಾನೆ ಡಿ. 1 ಮತ್ತು 3 ರಡಿಯಲ್ಲಿ ನ್ಯಾಯಾಲಯವು ತೀರ್ಪನ್ನು ನೀಡಿರುವುದರಿಂದ ಈ ದಾವೆಯು ಊರ್ಜಿತವಾಗತಕ್ಕದಲ್ಲ ಎಂದರೆ ಸರಿಯಲ್ಲ. ನಾನು ಪ್ರತಿವಾದಿ 10 ಹಾಗೂ ಅವರ ಕುಟುಂಬಸ್ಥರಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ದಾವೆಯನ್ನು ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

(ಸಾಕ್ಷಿದಾರರ ಸಹಿ) ಸಹಿ

ಹಿರಿಯ ಸಿವಿಲ್ ನ್ಯಾಯಾಧೀಶರು
ವಿರಾಜಪೇಟೆ.